ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

2019-20ರ ಸಾರಿಗೆ ಇಲಾಖೆ ಲಾಭ/ನಷ್ಟದ ಕುರಿತು

ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

663 (776) ಮಾನ್ಯ ಉಪ ಮುಖ್ಯಮಂತ್ರಿಯವರು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) 2019-20ನೇ ಸಾಲಿನಲ್ಲಿ ಕೆ.ಎಸ್.ಆರ್.ಟಿ.ಸಿ. ಮತ್ತು ಬಿ.ಎಂ.ಟಿ.ಸಿಗಳಿಂದ ಆದ ಲಾಭ ಎಷ್ಟು; ನಷ್ಟವಾಗಿದ್ದಲ್ಲಿ ಅದಕ್ಕೆ ಕಾರಣವೇನು; (ಲಾಭ ಹಾಗೂ ನಷ್ಟದ ವಿವರ ನೀಡುವುದು)

(ಆ) ಕೊರೋನ ಲಾಕ್‌ಡೌನ್ ಸಮಯದಲ್ಲಿ ಇಲಾಖೆಯ ನೌಕರರಿಗೆ ಸರಿಯಾಗಿ ಮಾಸಿಕ ಸಂಬಳ ನೀಡಲಾಗಿದೆಯೇ;

(ಇ) ಕೋವಿಡ್ ಲಾಕ್‌ಡೌನ್ ಸಮಯದಲ್ಲಿ ವಲಸೆ ಕಾರ್ಮಿಕರನ್ನು ತಮ್ಮ ತಮ್ಮ ಊರುಗಳಿಗೆ ಕಳುಹಿಸುವಲ್ಲಿ ಸಾರಿಗೆ ಇಲಾಖೆ ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ವಿಪಕ್ಷಗಳ ಒತ್ತಾಯದ ಮೇರೆಗೆ ಎಷ್ಟು ವಲಸೆ ಕಾರ್ಮಿಕರಿಗೆ ಉಚಿತ ಪ್ರಯಾಣಕ್ಕೆ ಅವಕಾಶ ಮಾಡಿಕೊಡಲಾಗಿಯೇ? (ವಿವರ ನೀಡುವುದು)